ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೦೩**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೇಳನೇ ಅಧಿವೇಶನ**

**ಗುರುವಾರ, ದಿನಾಂಕ: ೦೫ನೇ ಫೆಬ್ರವರಿ, ೨೦೧೫**

---

**ಸಮೂಹ – IV**

೧. ಮುಖ್ಯಮಂತ್ರಿಗಳು

೨. ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು

೩. ಗೃಹ ಸಚಿವರು

೪. ನಗರಾಭಿವೃದ್ಧಿ ಸಚಿವರು

---

## ದೊಡ್ಡ ದೊಡ್ಡ ಕಂಪನಿಗಳು, ಕೈಗಾರಿಕಾ ಘಟಕಗಳು ನೆರೆ ರಾಜ್ಯದ ಪಾಲಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೧ (೨೭೬) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿಯ ದೊಡ್ಡ ದೊಡ್ಡ ಕಂಪನಿಗಳು ಕೈಗಾರಿಕಾ ಘಟಕಗಳು ಕೈತಪ್ಪಿ ನೆರೆ ರಾಜ್ಯಗಳ ಪಾಲಾಗುತ್ತಿರುವ ವಿಷಯ ಸರಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ನಮ್ಮ ರಾಜ್ಯದಲ್ಲಿ ಕೈಗಾರಿಕಾ ಘಟಕ ಸ್ಥಾಪಿಸಲು ಕಳೆದ ಎರಡು ವರ್ಷಗಳಲ್ಲಿ ಎಷ್ಟು ಕಂಪನಿಗಳು ಮುಂದೆ ಬಂದಿವೆ ;

(ಇ) ಸದ್ಯ ನಮ್ಮ ರಾಜ್ಯದಲ್ಲಿ ಘಟಕ ಸ್ಥಾಪಿಸಲು ಸಿಂಗಲ್ ವಿಂಡೋ ಅಡಿಯಲ್ಲಿ (ಏಜೆನ್ಸಿ) ಎಷ್ಟು ಕಂಪನಿಗಳು ಮುಂದೆ ಬಂದಿವೆ ; ಅವು ಯಾವುವು ;

(ಈ) ನಮ್ಮ ರಾಜ್ಯ ಸರಕಾರವು ಇಂತಹ ಕಂಪನಿಗಳಿಗೆ ಅವಶ್ಯವಿರುವ ಎಲ್ಲ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸಿದ್ಧವಿದೆಯೇ ;

(ಉ) ಯಾವ ಕಾಲಮಿತಿಯಲ್ಲಿ ಇಂತಹ ಕಂಪನಿಗಳು ತಮ್ಮ ಯೋಜನೆಗಳನ್ನು ಅನುಷ್ಠಾನಗೊಳಿಸಲಿವೆ ; ಯೋಜನೆಗಳಿಗೆ ಅನುಮತಿ ನೀಡಲಾಗಿದೆಯೇ ?

## ಗೃಹ ರಕ್ಷಕ ದಳ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೨ (೨೫೩) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಗೃಹ ರಕ್ಷಕ ದಳದ ಒಟ್ಟು ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಗೃಹ ರಕ್ಷಕ ದಳವನ್ನು ಬಲಪಡಿಸಲು ಸರ್ಕಾರ ಯಾವ ಯೋಜನೆಗಳನ್ನು ರೂಪಿಸಿದೆ ;

(ಇ) ಗೃಹ ರಕ್ಷಕ ದಳದಲ್ಲಿ ಸೇವೆ ಸಲ್ಲಿಸುವವರಿಗೆ ನೀಡುವ ಸವಲತ್ತುಗಳೇನು ?

## ತಲೆ ಮರೆಸಿಕೊಂಡಿರುವ ಆರೋಪಿಗಳನ್ನು ಶಿಕ್ಷೆಗೆ ಗುರಿಪಡಿಸುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೩ (೩೩೯) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೫ ವರ್ಷಗಳಿಂದ ವಿವಿಧ ರೀತಿಯ ಅನೈತಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ನೆರೆ ರಾಜ್ಯಗಳಲ್ಲಿ ಹಾಗೂ ವಿದೇಶಗಳಲ್ಲಿ ತಲೆಮರೆಸಿಕೊಂಡಿರುವವರ ಸಂಖ್ಯೆ ಎಷ್ಟು ;

(ಆ) ಈ ಆರೋಪಿಗಳಲ್ಲಿ ಲುಕ್ ಔಟ್ ನೋಟೀಸ್ ನೀಡಿ ಎಷ್ಟು ಜನ ಆರೋಪಿಗಳಿಗೆ ವಿಚಾರಣೆ ನಡೆಸಲಾಗಿದೆ ; ಹೀಗೆ ಲುಕ್ ಔಟ್ ನೋಟೀಸ್ ನೀಡುವಾಗ ಅನುಸರಿಸಬೇಕಾದ ಮಾನದಂಡಗಳೇನು ;

(ಇ) ಕಳೆದ ೫ ವರ್ಷಗಳಿಂದ ಹೀಗೆ ತಲೆಮರೆಸಿಕೊಂಡಿರುವ ಎಷ್ಟು ಜನ ಆರೋಪಿಗಳನ್ನು ರಾಜ್ಯಕ್ಕೆ ತಂದು ಶಿಕ್ಷೆಗೆ ಒಳಪಡಿಸಲಾಗಿದೆ ?

## ರಾಜ್ಯದಲ್ಲಿ ಬೀದಿನಾಯಿಗಳ ದಾಳಿ ತಡೆಗಟ್ಟಲು ಕೈಗೊಂಡಿರುವ ಕ್ರಮಗಳು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪ (೨೯೬) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಿಂದ ಬೀದಿ ನಾಯಿಗಳ ದಾಳಿಗೊಳಗಾದವರ ಸಂಖ್ಯೆ ಎಷ್ಟು ;

(ಆ) ಬೀದಿ ನಾಯಿಗಳ ದಾಳಿಗೊಳಗಾದವರಿಗೆ ಸರ್ಕಾರ ನೀಡಿರುವ ಪರಿಹಾರದ ಮೊತ್ತ ಎಷ್ಟು ;

(ಇ) ಹಾಸನ ಜಿಲ್ಲೆಯಲ್ಲಿ ನಡೆದ ಬೀದಿ ನಾಯಿಗಳ ದಾಳಿ ಪ್ರಕರಣಗಳ ಸಂಖ್ಯೆ ಎಷ್ಟು ; ನೀಡಿರುವ ಪರಿಹಾರದ ಮೊತ್ತ ಎಷ್ಟು ;

(ಈ) ಬೀದಿ ನಾಯಿಗಳ ನಿಯಂತ್ರಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಹುಬ್ಬಳ್ಳಿ–ಧಾರವಾಡ ಅವಳಿ ನಗರದಲ್ಲಿನ ರಸ್ತೆ ದುರಸ್ತಿಗೆ ವಿನಿಯೋಗಿಸಿದ ಅನುದಾನ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೩೫ (೩೨೭) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹುಬ್ಬಳ್ಳಿ–ಧಾರವಾಡ ಅವಳಿ ನಗರಗಳಲ್ಲಿ ೨೦೦೬ರಿಂದ ೨೦೧೨ರವರೆಗೆ ರಸ್ತೆ ಅಭಿವೃದ್ಧಿಗೆಂದು ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ ; ಯಾವ ಯಾವ ಸ್ಥಳಗಳಲ್ಲಿ ರಸ್ತೆ ದುರಸ್ತಿ/ನಿರ್ಮಾಣ ಮಾಡಲಾಗಿದೆ ; (ವರ್ಷವಾರು ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

(ಆ) ಮುಖ್ಯಮಂತ್ರಿಗಳ ವಿಶೇಷ ಅನುದಾನದ ನಗರೋತ್ಥಾನ ಯೋಜನೆಯಲ್ಲಿ ಹಂತ ಹಂತವಾಗಿ ಖರ್ಚು ಮಾಡಲಾಗಿರುವ ಒಟ್ಟು ಹಣದ ಸಂಪೂರ್ಣ ಮಾಹಿತಿಯನ್ನು ಒದಗಿಸುವುದು ;

(ಇ) ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ಸ್ಥಿರಾಸ್ತಿಗಳನ್ನು ಎಲ್ಲೆಲ್ಲಿ ಅಡವಿಡಲಾಗಿದೆ ; ಅಡವಿಟ್ಟು ಪಡೆಯಲಾದ ಒಟ್ಟು ಸಾಲದ ಮೊತ್ತವೆಷ್ಟು ; ಪಡೆಯಲಾದ ಸಾಲಕ್ಕೆ ಈವರೆಗೆ ಪಾವತಿಸಿದ ಬಡ್ಡಿಯ ಮೊತ್ತವೆಷ್ಟು ;

## ಅನುಕಂಪದ ಆಧಾರದ ಮೇಲೆ ನೇಮಕಾತಿ

**ಶ್ರೀ ಕೆ.ಬಿ. ಶಾಣಪ್ಪ (ನಾಮನಿರ್ದೇಶನ ಹೊಂದಿದವರು) –**

೩೬ (೩೦೩) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಿಕೊಂಡಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ವರ್ಷಾವಾರು ಮಾಹಿತಿ ನೀಡುವುದು)

(ಆ) ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಬಾಕಿ ಉಳಿದಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಅವಧಿವಾರು ಮಾಹಿತಿ ನೀಡುವುದು)

(ಇ) ಈಗಾಗಲೇ ನಗರಾಭಿವೃದ್ಧಿ ಇಲಾಖೆಯಲ್ಲಿ ಅನುಕಂಪ ಆಧಾರದ ಮೇಲೆ ನೇಮಕಾತಿ ಹೊಂದಿರುವ ಅಭ್ಯರ್ಥಿಗಳಿಗೆ ಸರಕಾರದ ಸುತ್ತೋಲೆಯನ್ವಯ ಅವರವರ ವಿದ್ಯಾರ್ಹತೆಗೆ ಅನುಗುಣವಾದ ಹುದ್ದೆಗೆ, ಅವರು ಸಲ್ಲಿಸಿರುವ ಅರ್ಜಿಯ ದಿನಾಂಕವನ್ನು ಪರಿಗಣಿಸಿ ನೇಮಕಾತಿ ಮಾಡಿಕೊಳ್ಳಲಾಗಿದೆಯೇ ; ಇಲ್ಲದಿದ್ದಲ್ಲಿ, ವಿವರಣೆ ನೀಡುವುದು ;

(ಈ) ನೇಮಕಾತಿಗಾಗಿ ಬಾಕಿ ಉಳಿದಿರುವ ಪ್ರಕರಣಗಳಲ್ಲಿ ಅಭ್ಯರ್ಥಿಗಳು ಸಲ್ಲಿಸಿರುವ ಅರ್ಜಿಯ ವಿವರಗಳು ದಿನಾಂಕದೊಂದಿಗೆ ಒದಗಿಸುವುದು ? (ಪ್ರತ್ಯೇಕ ಅಭ್ಯರ್ಥಿವಾರು)

## ದೇವಾಲಯದ ಅಭಿವೃದ್ಧಿ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೩೭ (೨೮೧) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾವೇರಿ, ಕಪಿಲಾ, ಸ್ಫಟಿಕಾ ಸರೋವರಗಳ ತ್ರಿವೇಣಿ ಸಂಗಮದ ತಟದಲ್ಲಿರುವ ದಕ್ಷಿಣ ಕಾಶಿ ಎಂದೇ ಪ್ರಸಿದ್ಧಗೊಂಡಿರುವ 'ಗುಂಜಾ ನರಸಿಂಹಸ್ವಾಮಿ ದೇವಾಲಯ' ದಲ್ಲಿ ಮೂಲಭೂತ ಸೌಕರ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪ್ರತಿನಿತ್ಯ ನೂರಾರು ಭಕ್ತರು ಕೊಳಚೆ ನೀರಿನಲ್ಲಿ ಸ್ನಾನ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ದೇವಾಲಯದ ಅಭಿವೃದ್ಧಿಗೆ ಕಳೆದ ೩ ವರ್ಷಗಳ ಆಯವ್ಯಯದಲ್ಲಿ ಬಿಡುಗಡೆ ಮಾಡಿದ ಹಣವೆಷ್ಟು, ಅಭಿವೃದ್ಧಿ ಕಾರ್ಯಗಳಿಗೆ ವೆಚ್ಚ ಮಾಡಲಾದ ಹಣವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಈ) ಸದರಿ ದೇವಸ್ಥಾನದ ಆವರಣದಲ್ಲಿ ಮರಳು ಮಾಫಿಯಾ ನಡೆಯುತ್ತಿರುವುದು ನಿಜವೇ ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಉ) ಈ ರೀತಿ ಅಕ್ರಮ ಮರಳು ತೆಗೆದಿರುವ ಗುಂಡಿಗಳಿಗೆ ಬಿದ್ದು ಮೃತಪಟ್ಟ ಭಕ್ತರ ಸಂಖ್ಯೆ ಎಷ್ಟು ? (ವಿವರವಾದ ಮಾಹಿತಿ ನೀಡುವುದು)

## ಪೊಲೀಸ್ ಇಲಾಖೆಯ ಸಿಬ್ಬಂದಿಗಳಿಗೆ ಪೂರಕ ಸೌಲಭ್ಯ ಒದಗಿಸುವ ಬಗ್ಗೆ

**ಶ್ರೀ ಸಿ.ಎಚ್. ವಿಜಯ ಶಂಕರ (ವಿಧಾನಸಭೆಯಿಂದ ಚುನಾಯಿತರಾದವರು) –**

೩೮ (೨೮೬) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೊಲೀಸ್ ಇಲಾಖೆ ಸಿಬ್ಬಂದಿ ದೇಶದ ಗಡಿ ಕಾಯುವ ರಕ್ಷಣಾ ಇಲಾಖೆಯ ಸಿಬ್ಬಂದಿಯಷ್ಟೇ ಆಂತರಿಕ ಭದ್ರತೆ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವ ಹಿನ್ನೆಲೆಯಲ್ಲಿ ಅನಿವಾರ್ಯ ಎಂಬುದನ್ನು ಸರ್ಕಾರ ಒಪ್ಪುತ್ತದೆಯೇ ;

(ಆ) ಹಾಗಿದ್ದಲ್ಲಿ, ದೇಶದ ಗಡಿ ಕಾಯುವ ಸೈನಿಕರಿಗೆ ಸರ್ಕಾರ ಹಾಲಿ ಒದಗಿಸುತ್ತಿರುವ ಸಂಬಳ, ಸಾರಿಗೆ, ಭತ್ಯೆ ಮತ್ತು ವಸತಿ ಇತರೆ ಪೂರಕ ಅನುಕೂಲತೆಗಳನ್ವಯ ರಾಜ್ಯದ ಪೊಲೀಸ್ ಇಲಾಖೆಯ ಸಿಬ್ಬಂದಿಗಳಿಗೂ ಅನುಕೂಲತೆಗಳನ್ನು ಒದಗಿಸಲು ಸಾಧ್ಯವಿಲ್ಲವೇ ;

(ಇ) ಪೊಲೀಸ್ ಇಲಾಖೆಯ ಸಿಬ್ಬಂದಿ ಹಾಗೂ ಅಧಿಕಾರಿಗಳ ಸೇವಾ ಸಾಮರ್ಥ್ಯ, ದಕ್ಷತೆ ಹಾಗೂ ಅವರ ಕಾರ್ಯಕ್ಷಮತೆ ಹೆಚ್ಚಿಸುವಲ್ಲಿ ಇಲಾಖೆಯ ಸದ್ಯದ ನಿಯಮಾವಳಿಗಳೇನು, ಹಾಗೂ ಸರ್ಕಾರ ಈ ನಿಟ್ಟಿನಲ್ಲಿ ತೆಗೆದುಕೊಂಡಿರುವ ಪೂರಕ ಕ್ರಮಗಳು ಯಾವುವು ; (ಮಾಹಿತಿ ನೀಡುವುದು)

(ಈ) ದೇಶದ ಉತ್ತರ ಭಾರತದ ರಾಜ್ಯಗಳಾದ ಪಂಜಾಬ್, ಹರಿಯಾಣ, ದೆಹಲಿ, ಕಾಶ್ಮೀರ ಮತ್ತು ದಕ್ಷಿಣ ಭಾರತದ ತಮಿಳುನಾಡು, ಕೇರಳ ಈ ರಾಜ್ಯಗಳಲ್ಲಿ ಪೊಲೀಸ್ ಇಲಾಖೆಗೆ ಒದಗಿಸುತ್ತಿರುವ ಸೌಲಭ್ಯಗಳಿಗೂ ನಮ್ಮ ರಾಜ್ಯಕ್ಕೂ ಇರುವ ವ್ಯತ್ಯಾಸಗಳೇನು ? (ವಿವರ ಒದಗಿಸುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಸ್ತಿಗಳ ಒತ್ತುವರಿ ತೆರವು

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯ (೨೯೯) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ಪಾಲಿಕೆಯ ಆಸ್ತಿಗಳು ಒತ್ತುವರಿ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅಂತಹ ಆಸ್ತಿಗಳ ಒಟ್ಟು ವಿಸ್ತೀರ್ಣ ಎಷ್ಟು ; ಪ್ರಸ್ತುತ ಮಾರುಕಟ್ಟೆ ದರದಲ್ಲಿ ಅವುಗಳ ಮೌಲ್ಯ ಎಷ್ಟು ;

(ಇ) ಒತ್ತುವರಿ ಆಸ್ತಿಗಳನ್ನು ತೆರವುಗೊಳಿಸಲು ಈವರೆವಿಗೂ ತೆಗೆದುಕೊಂಡಿರುವ ಕ್ರಮಗಳೇನು ; ಎಷ್ಟು ಆಸ್ತಿಗಳ ಒತ್ತುವರಿಯನ್ನು ತೆರವುಗೊಳಿಸಲಾಗಿದೆ ? (ಆಸ್ತಿವಾರು ವಿವರ ಒದಗಿಸುವುದು)

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಧಾರ್ಮಿಕ ದತ್ತಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಣ ಸಂಸ್ಥೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೦ (೧೫೫) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಧಾರ್ಮಿಕ ದತ್ತಿ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು ; ಅವು ಯಾವುವು ; ಸದರಿ ಸಂಸ್ಥೆಗಳು ಎಂದಿನಿಂದ ಕಾರ್ಯನಿರ್ವಹಿಸುತ್ತಿವೆ ;

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಧಾರ್ಮಿಕ ದತ್ತಿ ಇಲಾಖೆಯಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಣ ಸಂಸ್ಥೆಗಳಲ್ಲಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಶಿಕ್ಷಣ ಸಂಸ್ಥೆ ಹೆಸರು, ಸಿಬ್ಬಂದಿಗಳ ಹೆಸರು, ಹುದ್ದೆ, ವಿಳಾಸ, ನೇಮಕಾತಿ ಆದ ದಿನಾಂಕದೊಂದಿಗೆ ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಧಾರ್ಮಿಕ ದತ್ತಿ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಣ ಸಂಸ್ಥೆಗಳಲ್ಲಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳಲ್ಲಿ ಸೇವಾ ಖಾಯಂಮಾತಿ ಆದವರ ಸಂಖ್ಯೆ ಎಷ್ಟು ; ಸೇವಾ ಖಾಯಂಮಾತಿ ಆಗದವರ ಸಂಖ್ಯೆ ಎಷ್ಟು ; (ಸದರಿಯವರುಗಳ ಹೆಸರು, ಹುದ್ದೆ, ವಿಳಾಸ, ಕಾರ್ಯನಿರ್ವಹಿಸುತ್ತಿರುವ ಶಿಕ್ಷಣ ಸಂಸ್ಥೆಯ ಸಹಿತ ವಿವರ ನೀಡುವುದು)

(ಈ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಧಾರ್ಮಿಕ ದತ್ತಿ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ರೋಸ್ಟರ್ ಪದ್ಧತಿಯನ್ನು ಪಾಲಿಸಿ ಧಾರ್ಮಿಕ ದತ್ತಿ ಇಲಾಖಾ ಅನುಮೋದನೆಯೊಂದಿಗೆ ಕೆಲಸಕ್ಕೆ ಸೇರಿ ಇನ್ನೂ ನ್ಯಾಯಸಮ್ಮತವಾದ ವೇತನ ಪಡೆಯದೆ ಸೇವಾ ಖಾಯಂಮಾತಿಯನ್ನು ಹೊಂದದೆ ಅನಿಶ್ಚಿತತೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ಸರಿಪಡಿಸಲು ಸರ್ಕಾರ ತುರ್ತು ಕ್ರಮ ಕೈಗೊಳ್ಳುವುದೇ ?

## ರಾಜ್ಯ ಸರ್ಕಾರಿ ನೌಕರರಿಗೆ ಮನೆ ಬಾಡಿಗೆ ಭತ್ಯೆ

**ಶ್ರೀ ಐವಾನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೪೧ (೩೨೫) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಯವ್ಯಯದಲ್ಲಿ ಪ್ರಕಟಿಸಿದಂತೆ ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ರಾಜ್ಯ ಸರ್ಕಾರಿ ನೌಕರರಿಗೆ ಕೇಂದ್ರ ಸರ್ಕಾರದ ನೌಕರರಂತೆ ಸಮಾನವಾದ ೨೦% ಮನೆ ಬಾಡಿಗೆ ಭತ್ಯೆಯನ್ನು ನೀಡಲಾಗುವುದೆಂದು ಘೋಷಿಸಿದ್ದು, ಈವರೆವಿಗೂ ರಾಜ್ಯ ಸರ್ಕಾರಿ ನೌಕರರಿಗೆ ಕೇವಲ ೧೦% ಮನೆ ಬಾಡಿಗೆ ಭತ್ಯೆಯನ್ನು ನೀಡುತ್ತಿರಲು ಕಾರಣಗಳೇನು ;

(ಆ) ಈ ತಾರತಮ್ಯವನ್ನು ಯಾವಾಗ ಸರಿಪಡಿಸಲಾಗುವುದು ; (ಸಂಪೂರ್ಣ ವಿವರ ನೀಡುವುದು)

(ಇ) ೨೦೧೧ನೇ ಸಾಲಿನ ಜನಗಣತಿ ಪ್ರಕಾರ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ೮ ಕಿ.ಮೀ. ದೂರದ ಪ್ರದೇಶಗಳನ್ನು ಸೇರಿಸಿ, ರಾಜ್ಯ ಸರ್ಕಾರ ೩೦% ಮನೆ ಬಾಡಿಗೆ ಭತ್ಯೆಯನ್ನು ನಿಗದಿಪಡಿಸಿದ್ದು, ಆದರೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆದೇಶದನ್ವಯ ಮಂಗಳೂರು ಮಹಾನಗರ ಪಾಲಿಕೆಯು ವರ್ಗೀಕರಣ ಹೊಂದಲು ಅರ್ಹತೆ ಇದ್ದರೂ, ಮಂಗಳೂರು ನಗರವನ್ನು "ಸಿ" ದರ್ಜೆ ನಗರ ಎಂದು ಘೋಷಿಸಿರುವುದರಿಂದ ನೌಕರರಿಗೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸರ್ಕಾರದಿಂದ ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಈ ತಾರತಮ್ಯವನ್ನು ಯಾವಾಗ ಸರಿಪಡಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಬೆಂಗಳೂರು ನಗರದ ಅರಮನೆ ಮೈದಾನ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೪೨ (೩೦೨) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ಅರಮನೆ ಮೈದಾನದ ಒಟ್ಟು ಪ್ರದೇಶವೆಷ್ಟು ; ಈ ಪ್ರದೇಶ ಯಾರ ಸುಪರ್ದಿಯಲ್ಲಿರುತ್ತದೆ ;

(ಆ) ಈ ಪ್ರದೇಶದಲ್ಲಿ ಮದುವೆ ಮುಂತಾದ ಸಭೆ ಸಮಾರಂಭಗಳನ್ನು ನಡೆಸಲು ನಿರ್ಮಾಣ ಮಾಡಿರುವ ಶಾಶ್ವತ ಮತ್ತು ತಾತ್ಕಾಲಿಕ ಸಭಾ ಭವನಗಳೆಷ್ಟು ; ಯಾರ್ಯಾರು ನಿರ್ಮಾಣ ಮಾಡಿದ್ದಾರೆ ; (ಪೂರ್ಣ ವಿವರ ನೀಡುವುದು)

(ಇ) ಈ ಸಭಾಭವನಗಳನ್ನು ನಿರ್ಮಾಣ ಮಾಡಲು ಯಾರಿಂದ ಅನುಮತಿ ಪಡೆಯಲಾಗಿದೆ ; ಎಷ್ಟು ವರ್ಷಗಳಿಗೆ ಪಡೆಯಲಾಗಿದೆ ; ಅವುಗಳಿಂದ ರಾಜ್ಯ ಸರ್ಕಾರಕ್ಕೆ ಬರುತ್ತಿರುವ ಆದಾಯ ಎಷ್ಟು ; (ವರ್ಷಾವಾರು, ಸಭಾ ಭವನವಾರು ಆದಾಯದ ವಿವರ ನೀಡುವುದು)

(ಈ) ಸದರಿ ಸಭಾ ಭವನಗಳಲ್ಲಿ ಯಾವ ಯಾವ ಕಾರ್ಯಕ್ರಮಗಳಿಗೆ ಒಂದು ದಿನಕ್ಕೆ ವಿಧಿಸುವ ಬಾಡಿಗೆ ಮೊತ್ತವೆಷ್ಟು ; ಯಾವ ಯಾವ ಕಾರ್ಯಕ್ರಮಗಳಿಗಾಗಿ ಯಾರ್ಯಾರು ಪಡೆದಿದ್ದಾರೆ ? (ಸಭಾ ಭವನವಾರು, ಕಾರ್ಯಕ್ರಮಗಳವಾರು ವಿವರ ನೀಡುವುದು)

## ಹಿಂದೂ ಧಾರ್ಮಿಕ ದತ್ತಿ ತಿದ್ದುಪಡಿ ವಿಧೇಯಕವನ್ನು ಹಿಂಪಡೆಯುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೪೩ (೩೪೭) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದೂ ಧಾರ್ಮಿಕ ದತ್ತಿ ತಿದ್ದುಪಡಿ ವಿಧೇಯಕವನ್ನು ಕಳೆದ ವಿಧಾನ ಪರಿಷತ್ತಿನ ಅಧಿವೇಶನದಲ್ಲಿ ಮಂಡಿಸಿ ವಾಪಸ್ ಪಡೆಯಲಾಗುವುದೆಂಬ ಸಂಗತಿ ನಿಜವೇ ;

(ಆ) ಹೊಸ ಹಿಂದೂ ಧಾರ್ಮಿಕ ದತ್ತಿ ಕಾನೂನು ಜಾರಿಗೊಳ್ಳುವವರೆಗೂ ಈಗಿರುವ ಬಾಂಬೆ ಪಬ್ಲಿಕ್ ಟ್ರಸ್ಟ್ ಆಕ್ಟ್ ಕಾಯಿದೆಯನ್ನು ಮುಂದುವರೆಸಲು ಕ್ರಮ ಕೈಗೊಳ್ಳಲಾಗುವುದೇ ;

(ಇ) ರಾಜ್ಯದಲ್ಲಿ ಈಗ ಹಿಂದೂ ಧಾರ್ಮಿಕ ದತ್ತಿ ಕಾಯಿದೆ ಇಲ್ಲದೆ ಇರುವುದರಿಂದ ಹೊಸದಾಗಿ ನೋಂದಣಿ ಮಾಡುವ ಹಾಗೂ ತಿದ್ದುಪಡಿ ಮಾಡುವ ಎಲ್ಲ

ಕೆಲಸಗಳಿಗೆ ತೊಂದರೆಯಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಿಂದೂ ಧಾರ್ಮಿಕ ದತ್ತಿ ಕಾಯಿದೆ ಇಲ್ಲದೆ ಇರುವುದರಿಂದ ಬಾಂಬೆ ಪಬ್ಲಿಕ್ ಟ್ರಸ್ಟ್ ಅಡಿಯಲ್ಲಿ ನೋಂದಾದ ಕಮಿಟಿಯವರು ಯಾವುದೇ ಅಧಿಕಾರಿಗಳ ಒಪ್ಪಿಗೆ ಪಡೆಯದೇ ಟ್ರಸ್ಟ್ ಆಸ್ತಿಗಳನ್ನು ಮಾರುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಟ್ರಸ್ಟಿನ ಆಸ್ತಿ ಹಾಳಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದ್ದರೂ ಅಂಥ ಟ್ರಸ್ಟ್ ಕಮಿಟಿಯ ಮಾಲೀಕರ ಮೇಲೆ ಸರ್ಕಾರ ಯಾವುದೇ ಕ್ರಮ ಕೈಗೊಳ್ಳದೆ ಇರುವುದು ಹಾಗೂ ಧಾರ್ಮಿಕ ದತ್ತಿ ಕಾನೂನು ಅಸ್ತಿತ್ವದಲ್ಲಿ ಇಲ್ಲದೆ ಇರುವುದರಿಂದ, ಬಾಂಬೆ ಪಬ್ಲಿಕ್ ಟ್ರಸ್ಟ್ ಆಕ್ಟ್ ಇಲ್ಲದೆ ಇರುವುದರಿಂದ ಸಂಸ್ಥೆಯವರು ಯಾವುದೇ ಆಡಿಟ್ ವರದಿಯನ್ನು ಹಾಗೂ ಆಸ್ತಿ ಮಾರಾಟ ಮಾಡಿದ ಬಗ್ಗೆ ಯಾವುದೇ ಕಛೇರಿಗೂ ಮಾಹಿತಿ ಕೊಡದೇ ಇರುವುದರಿಂದ ಟ್ರಸ್ಟಿನ ಆಸ್ತಿ ಹಾಳಾಗುತ್ತಿರುವ ಹಿನ್ನೆಲೆಯಲ್ಲಿ ಹೊಸ ಕಾನೂನು ಬರುವವರೆಗೂ ಈಗಿರುವ ಬಾಂಬೆ ಪಬ್ಲಿಕ್ ಟ್ರಸ್ಟ್ ಆಕ್ಟ್ ಕಾಯಿದೆಯನ್ನು ಮುಂದುವರೆಸಲು ಕ್ರಮ ಕೈಗೊಳ್ಳಲಾಗುವುದೇ ?

## ಉದ್ಯೋಗದಲ್ಲಿ ಮಹಿಳಾ ಮೀಸಲಾತಿ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು ) –**

೪೪ (೨೬೧) ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ವಿದ್ಯಾವಂತ ಮಹಿಳೆಯರ ಸಂಖ್ಯೆ ಹೆಚ್ಚಾಗುತ್ತಿರುವ ಕಾರಣ, ಮಹಿಳೆಯರ ಹಿತದೃಷ್ಟಿಯಿಂದ ಕರ್ನಾಟಕ ಸರ್ಕಾರಿ ಸೇವೆಯ ಉದ್ಯೋಗ ನೇಮಕದಲ್ಲಿ ಹಾಲಿಯಿರುವ ಶೇ. ೩೦ರ ಮಹಿಳಾ ಮೀಸಲು ಪ್ರಮಾಣವನ್ನು ಶೇ. ೩೩ಕ್ಕೆ ಹೆಚ್ಚಿಸಲು ಸರ್ಕಾರ ಚಿಂತಿಸುವುದೇ ?

## ಪಿ.ಎಸ್.ಐ. (ಸಿವಿಲ್) ಹುದ್ದೆಗಳ ಲಿಖಿತ ಪರೀಕ್ಷೆಯಲ್ಲಿನ ನ್ಯೂನತೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೪೫ (೩೩೭) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್) ಹುದ್ದೆಗಳಿಗೆ ಇತ್ತೀಚೆಗೆ ನಡೆದ ಲಿಖಿತ ಪರೀಕ್ಷೆಯಲ್ಲಿ ನೀಡಲಾದ ಪ್ರಶ್ನೆ ಹಾಗೂ ಕೀ ಉತ್ತರಗಳು ತಪ್ಪಾಗಿರುವ ಬಗ್ಗೆ ಹಲವು ದಿನಪತ್ರಿಕೆಗಳಲ್ಲಿ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ, ಯಾವ ಯಾವ ವಿಷಯ ಹಾಗೂ ಎಷ್ಟು ಪ್ರಶ್ನೆಗಳು ಹಾಗೂ ಕೀ ಉತ್ತರಗಳು ಪ್ರಾಧಿಕಾರದಿಂದ ತಪ್ಪಾಗಿ ನೀಡಲಾಗಿದೆ ; (ವಿವರಗಳೊಡನೆ)

(ಇ) ಪರೀಕ್ಷಾರ್ಥಿಗಳಿಗೆ ಅನ್ಯಾಯವಾಗದಂತೆ ಇದನ್ನು ಸರಿಪಡಿಸಲು ಇಲಾಖೆ ತೆಗೆದುಕೊಂಡ ಕ್ರಮಗಳೇನು ? (ವಿವರಗಳೊಡನೆ)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ. 1034, ಪ್ರತಿಗಳು– 1500 – ಪಿ8